# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 1614 (1740)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ವಿಷಯ : ರಾಜ್ಯದಲ್ಲಿ ಕರಡಿಗಳ ಸಂತತಿ ಹೆಚ್ಚುತ್ತಿರುವ ಬಗ್ಗೆ

(ಅ) ರಾಜ್ಯದಲ್ಲಿ ಕರಡಿಗಳ ಸಂಖ್ಯೆ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ರಾಜ್ಯದಲ್ಲಿ ಎಷ್ಟು ಕರಡಿಗಳಿವೆ; (ವಿವರ ನೀಡುವುದು)

(ಆ) ಇದುವರೆವಿಗೂ ನಮ್ಮ ರಾಜ್ಯದಲ್ಲಿ ಕರಡಿಗಳ ಗಣತಿ ಮಾಡಲಾಗಿದೆಯೇ; (ವಿವರ ನೀಡುವುದು)

(ಇ) ಕರಡಿಗಳ ಜೀವನ ವಿಧಾನದ ಬಗ್ಗೆ ಅರಣ್ಯ ಇಲಾಖೆ ಅಥವಾ ತಜ್ಞರಿಂದ ಯಾವುದಾದರು ಅಧ್ಯಯನ ನಡೆಸಲಾಗಿದೆಯೇ; (ವಿವರ ನೀಡುವುದು)

(ಈ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಕರಡಿ ದಾಳಿ ಪ್ರಕರಣಗಳು ವರದಿಯಾಗಿವೆ; 2015-2020 ರವರೆಗೆ ಕರಡಿ ದಾಳಿಯಿಂದ ಸಂಭವಿಸಿದ ಸಾವು-ನೋವು ಎಷ್ಟು? (ಜಿಲ್ಲಾವಾರು ವಿವರ ನೀಡುವುದು)